# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 373
ಸದಸ್ಯರ ಹೆಸರು : ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 15.09.2022.
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಜಾಗಗಳಿಗೆ /ಮನೆಗಳಿಗೆ ಇಲಾಖೆ ವತಿಯಿಂದ ಪೌತಿ ಖಾತೆ ಆಂದೋಲನವನ್ನು ನಡೆಸಲಾಗಿದೆಯೇ: ಇಲ್ಲವಾದ್ದಲ್ಲಿ, ಈ ಪೌತಿ ಖಾತೆ ಮಾಡಿಕೊಡುವ ಆಂದೋಲನವನ್ನು ನಡೆಸಲು ಸರ್ಕಾರದ ಚಿಂತನೆಗಳೇನು: (ಕೈಗೊಂಡಿರುವ ಕ್ರಮಗಳೇನು) | ಇಲ್ಲ.<br>ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಪೌತಿ ಆಸ್ತಿಗಳಿಗೆ ತೆರಿಗೆ ನಿರ್ಧರಣೆ ಪಟ್ಟಿ (ನಮೂನೆ-9, 11ಎ ಅಥವಾ 11ಬಿ) ಮಾಡಿಕೊಡುವ ಆಂದೋಲನವನ್ನು ನಡೆಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ. |
| (ಆ) | ಈ ಪೌತಿ ಖಾತೆ ಬದಲಾವಣೆ ಮತ್ತು ಸರಿಯಾದ ದಾಖಲೆಗಳನ್ನು ಹೊಂದಿರುವ ನಾಗರೀಕರಿಗೆ ದಾಖಲೆಗಳನ್ನು ನೀಡುವ ಆಂದೋಲನವನ್ನು ಪ್ರತಿ ಮೂರು ವರ್ಷಕ್ಕೊಮ್ಮೆ ಕಡ್ಡಾಯವಾಗಿ ನಡೆಸಲು ಸರ್ಕಾರ ಕ್ರಮ ಕೈಗೊಂಡಿದಿಯೇ; ವಿವರ ನೀಡುವುದು) | ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳು ಮತ್ತು ಕ್ರಮಬದ್ಧವಲ್ಲದ ಆಸ್ತಿಗಳಿಗೆ ಆಸ್ತಿಯ ಮಾಲೀಕರು ಸಂಬಂಧಿಸಿದ ದಾಖಲೆಗಳೊಂದಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 / 11ಎ ಅಥವಾ 11ಬಿ ನೀಡಲು ಗ್ರಾಮ ಪಂಚಾಯತಿಗಳಿಗೆ ಅರ್ಜಿ ಸಲ್ಲಿಸಿದ್ದಲ್ಲಿ ನಿಯಮಾನುಸಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಡಿಜಿಟಲ್ ಸಹಿಯ ಮೂಲಕ ನಮೂನೆಗಳನ್ನು ವಿತರಿಸಲು ಕ್ರಮ ವಹಿಸುವರು.<br>ನಮೂನೆಗಳನ್ನು ವಿತರಿಸುವುದು ಸಕಾಲ ಸೇವೆಯ ಕಾರ್ಯ ವ್ಯಾಪ್ತಿಗೆ ಸೇರ್ಪಟ್ಟಿದ್ದು, 45 ದಿನಗಳೊಳಗೆ ಅರ್ಜಿದಾರರು ನಿಯಮಗಳ ಪ್ರಕಾರ ಎಲ್ಲಾ ದಾಖಲಾತಿಗಳನ್ನು ಅವರು ಒದಗಿಸಿದ್ದಲ್ಲಿ ನೀಡಬೇಕಾಗಿರುತ್ತದೆ.<br>ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು (ತೆರಿಗೆ ನಿರ್ಧರಣೆ ಪಟ್ಟಿ) ವಿತರಿಸಲು ಗ್ರಾಮ ಪಂಚಾಯತಿ ಸಭೆಯ ಅನುಮೋದನೆ ಅಗತ್ಯವಿದ್ದು, ಸದರಿ ಸಭೆಯನ್ನು ನಿಯಮಿತವಾಗಿ ಮತ್ತು ತ್ವರಿತವಾಗಿ ಮಾಡದ ಕಾರಣ ಮತ್ತು ಅರ್ಜಿಗಳನ್ನು ಜೇಷ್ಠತೆ ಆಧಾರದಲ್ಲಿ ವಿಲೇ ಮಾಡದಿರುವುದರಿಂದ ನಮೂನೆಗಳನ್ನು ವಿತರಿಸಲು ವಿಳಂಬವಾಗುತ್ತಿದ್ದು, ಮೊದಲು ಬಂದ ಅರ್ಜಿಯನ್ನು ಸ್ವೀಕೃತಿ ದಿನಾಂಕದ ಆಧಾರದ ಮೇಲೆ ಮೊದಲು ಇತ್ಯರ್ಥಪಡಿಸಲು (First In First Out-FIFO) ಕ್ರಮ ವಹಿಸುವಂತೆ |
| (ಇ) | ಈ ಪೌತಿ ಖಾತೆ ಆಂದೋಲನಗಳನ್ನು ಮಾಡಿದ್ದಲ್ಲಿ ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗಿ ಗ್ರಾಮ ಪಂಚಾಯತಿಗಳ ಆದಾಯವು ವೃದ್ದಿಸುವ ಜೊತೆಗೆ ದಾಖಲೆಗಳನ್ನು ಸರಿಪಡಿಸಲು ಸಹಕಾರಿಯಲ್ಲವೆ: ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | |

| | | |
|---|---|---|
| | | ಹಾಗೂ ಸಕಾರಣವಿಲ್ಲದೆ ಅರ್ಜಿಗಳನ್ನು ತಿರಸ್ಕರಿಸುವುದು ಮತ್ತು ವಿಳಂಬ ಇಡದಂತೆ ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಗಿದೆ.<br><br>ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಅವಶ್ಯಕವಾಗಿರುವ ದಾಖಲೆಗಳ ಚೆಕ್‌ಲಿಸ್ಟ್‌ಗಳನ್ನು ಗ್ರಾಮ ಪಂಚಾಯತಿಗಳ ಸೂಚನಾ ಫಲಕಗಳಲ್ಲಿ ಕಡ್ಡಾಯವಾಗಿ ಅಳವಡಿಸುವ ಬಗ್ಗೆ ಕ್ರಮ ವಹಿಸುವಂತೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದೆ. |

ಸಂಖ್ಯೆ: ಗ್ರಾಅಪ 275 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ